# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1326 |
| ಸದಸ್ಯರ ಹೆಸರು | : | ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ |
| ಉತ್ತರಿಸುವ ದಿನಾಂಕ | : | 24.12.2021 |
| ಉತ್ತರಿಸುವ ಸಚಿವರು | : | ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಉತ್ತರ ಕನ್ನಡ ಜಿಲ್ಲೆಯ ದಟ್ಟ ಕಾಡುಗಳಲ್ಲಿ ವಾಸಿಸುವ ಕುಣಬಿ ಜನಾಂಗ ಸಾಮಾಜಿಕವಾಗಿ ಶೈಕ್ಷಣಿಕವಾಗಿ, ಆರ್ಥಿಕವಾಗೂ ಮತ್ತು ರಾಜಕೀಯವಾಗಿ ಅತ್ಯಂತ ಹಿಂದುಳಿದವರಾಗಿದ್ದು, ತನ್ನದೇ ಆದ ಸಂಸ್ಕೃತಿ ಹೊಂದಿದವರಾಗಿದ್ದು, ಬುಡಕಟ್ಟು ಸಂಸ್ಕೃತಿಯ ಎಲ್ಲಾ ಗುಣ ಲಕ್ಷಣಗಳನ್ನು ಹೊಂದಿದ್ದು, ಕಳೆದ ಹಲವಾರು ವರ್ಷಗಳಿಂದ ಕುಣಬಿ ಸಮಾಜ ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಒತ್ತಾಯಿಸುತ್ತಾ ಬಂದರು ಯಾವುದೇ ಕ್ರಮಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: (ವಿವರ ನೀಡುವುದು) | ಭಾರತ ಸಂವಿಧಾನದ ಅನುಚ್ಛೇಧ 342ರನ್ವಯ ಯಾವುದೇ ಜಾತಿಯನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರ್ಪಡೆ ಮಾಡುವ/ತೆಗೆಯುವ/ಇನ್ಯಾವುದೇ ಮಾರ್ಪಾಡು ಮಾಡುವ ಪರಮೋಚ್ಛ ಅಧಿಕಾರವು ಭಾರತ ಸರ್ಕಾರಕ್ಕೆ ಮಾತ್ರ ಇರುತ್ತದೆ.<br><br>ಅದರಂತೆ ಕುಣಬಿ ಸಮುದಾಯವನ್ನು |
| ಆ) | ಈ ವಿಷಯದಲ್ಲಿ ಕುಲಪತಿಗಳಿಂದ ಅಧ್ಯಯನ ನಡೆಸಿ ವರದಿ ನಿಡುತ್ತೇನೆಂದು ತಿಳಿಸಿದ್ದು, ಇವರನ್ನು ಯಾವ ಕಾರಣಕ್ಕಾಗಿ ಇಲ್ಲಿಯವರೆಗೆ ಪರಿಶಿಷ್ಟ ಪಂಗಡಕ್ಕೆ ಸೇರಿಸಿರುವುದಿಲ್ಲ; ಈ ಕುರಿತು ಸರ್ಕಾರಕ್ಕೆ ಪ್ರತಿ ಬಾರಿ ಒತ್ತಾಯಿಸುತ್ತಿದ್ದು, ಕಳೆದ 10 ವರ್ಷಗಳಿಂದ ಇಲ್ಲಿಯವರೆಗೆ ಯಾವುದೇ ಕ್ರಮ ಕೈಗೊಳ್ಳದಿರುವುದು ಈ ಸಮಾಜದವರು ಮೀಸಲಾತಿಯಿಂದ ವಂಚಿತರಾಗಿದ್ದು, ಇನ್ನೂ ಎಷ್ಟು ಕಾಲಾವಧಿಯಲ್ಲಿ ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಕ್ರಮ ವಹಿಸಲಾಗುವುದು? (ವಿವರ ನೀಡುವುದು) | ಕರ್ನಾಟಕ ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರ್ಪಡೆಗೊಳಿಸುವಂತೆ ಭಾರತ ಸರ್ಕಾರಕ್ಕೆ ದಿನಾಂಕ:10.10.2017ರಂದು ಶಿಫಾರಸ್ಸು ಮಾಡಲಾಗಿತ್ತು. ನಂತರದಲ್ಲಿ ಕೇಂದ್ರ ಸರ್ಕಾರದ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ ರವರು ಕೋರಿದ್ದ ಪರಿಶೀಲನಾ ಅಂಶಗಳಿಗೂ ಸಹ ಸಹ ಸೂಕ್ತ ಸಮರ್ಥನೆ/ವರದಿಯನ್ನು ದಿನಾಂಕ:21.02.2019ರಂದು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗಿದೆ. ಪ್ರಸ್ತುತ ಪ್ರಸ್ತಾವನೆಯು ಕೇಂದ್ರ ಸರ್ಕಾರದ ಹಂತದಲ್ಲಿ ಬಾಕಿ ಇರುತ್ತದೆ. |

ಸಕಇ 286 ಎಸ್ ಎಡಿ 2021

(ಬಿ. ಶ್ರೀರಾಮುಲು)
ಸಾರಿಗೆ ಹಾಗೂ ಪರಿಶಿಷ್ಟ ವರ್ಗಗಳ
ಕಲ್ಯಾಣ ಸಚಿವರು